ಅ) ಸಂತ್ರಸ್ತ ಕುಟುಂಬಗಳ ಸೌಲಭ್ಯ ನಿರ್ವಹಣೆಯನ್ನು ಹೊತ್ತ ಕಿಐಎಡಿಬಿಯವರು ಕೊಟ್ಟ ಆಶ್ವಾಸನೆಯ ಪ್ರಕಾರ ಎಲ್ಲಾ ಸೌಲಭ್ಯಗಳನ್ನು ಒದಗಿಸುವಲ್ಲಿ ಸಫಲರಾಗಿದ್ದರೆಯೇ, ಇಲ್ಲವಾದಲ್ಲಿ ಕಾರಣಗಳೇನು?

ಇ) ಮೂಲಭೂತ ಸೌಕರ್ಯಗಳಿಂದ ವಂಚಿತರಾದ ಈ ಸಂತ್ರಸ್ತ ಕುಟುಂಬಗಳಿಗೆ ಯಾವುದೇ ವಿಳಂಬವಿಲ್ಲದೇ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಜರುಗಿಸುವುದೇ?

ಶ್ರೀ ಬಿ.ಎಲ್. ಶಂಕರ್ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಯೋಜನೆಗಳ ಸಚಿವರು) :—

ಅ) ಎಂ.ಆರ್.ಪಿ.ಎಲ್. ಮತ್ತು ಎಚ್.ಪಿ.ಸಿ.ಎಲ್. ಕೈಗಾರಿಕೆಯ ಪ್ರದೇಶದ ಸಂತ್ರಸ್ತ ಕುಟುಂಬಗಳ ಸಂಖ್ಯೆ 609. ಇವರಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸಲಾಗಿದೆ.

ಆ) ಸರ್ಕಾರದ ಸುತ್ತೋಲೆ ಕ್ರಮಾಂಕ ಆರ್‌ಡಿ ನಂ. 118 ಎಲ್‌ಪಿ 92, ದಿನಾಂಕ: 18-12-1992ರ ಆದೇಶದಂತೆ ನಿರ್ವಸಿತರಿಗೆ ಪುನರ್‌ವಸತಿ ಕಾಲೋನಿಯಲ್ಲಿ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗಿದೆ.

ಇ) ಎಂ.ಆರ್.ಪಿ.ಎಲ್. ಪುನರ್‌ವಸತಿ ಕಾಲೋನಿಯಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ :— ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಿದ್ಯುಚ್ಛಕ್ತಿ ಕೊರತೆ.

2(204) ಶ್ರೀ ಕುಂಭಿ ಸುಂದರರಾವ್ (ಸುರತ್ಕಲ್) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಳಕೆಗಾಗಿ ಎಷ್ಟು ಕಿಲೋವ್ಯಾಟ್ ವಿದ್ಯುಚ್ಛಕ್ತಿಯ ಅವಶ್ಯಕತೆ ಇದೆ.

ಆ) ಪ್ರಸ್ತುತ ಸರಬರಾಜು ಆಗುತ್ತಿರುವ ವಿದ್ಯುಚ್ಛಕ್ತಿಯ ಪ್ರಮಾಣ ಎಷ್ಟು?

ಇ) ಕೊರತೆಯನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು) :—

ಅ) ದಕ್ಷಿಣ ಕನ್ನಡ ಜಿಲ್ಲೆಯ ಬಳಕೆಗಾಗಿ 180 ಮೆ.ವ್ಯಾ (1,80,000 ಕಿಲೋವ್ಯಾಟ್) ವಿದ್ಯುಚ್ಛಕ್ತಿಯ ಅವಶ್ಯಕತೆ ಇದೆ.

ಅ) ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಗೆ 145 ಮೆ.ವ್ಯಾ. (1,45,000 ಕಿಲೋ ವ್ಯಾಟ್ಸ್) ವಿದ್ಯುಚ್ಛಕ್ತಿ ಸರಬರಾಜಾಗುತ್ತಿದೆ.

ಆ) ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಸ್ಪರ್ಧಾತ್ಮಕ ಬಿಡ್ ಮೂಲಕ ಒಟ್ಟು 526 ಮೆ.ವ್ಯಾ. ಸಾಮರ್ಥ್ಯದ ಮೂಠರ್ ಭಾರ್ಜ್ ಮೌಂಟೆಡ್ ವಿದ್ಯುತ್ ಉತ್ಪಾದನಾ ಯೋಜನೆಗಳನ್ನು ಮತ್ತು ಎಂ.ಯು ಸರ್ಕಾರಿ ಆದೇಶಗಳ ಮೂಲಕ ಒಟ್ಟು 2028 ಮೆ.ವಾ. ಸಾಮರ್ಥ್ಯದ ಎರಡು ಕಲ್ಲಿದ್ದಲು ಆಧಾರಿತ ವಿದ್ಯುತ್ ಯೋಜನೆಗಳನ್ನು ಐಸಗಿ ವಲಯದಲ್ಲಿ ಸ್ಥಾಪಿಸಲು ಕರ್ನಾಟಕ ರಾಜ್ಯ ಸರ್ಕಾರ ಈಗಾಗಲೇ ಅನುಮೋದನೆಯನ್ನು ನೀಡಿದೆ. ಈ ವಿದ್ಯುತ್ ಯೋಜನೆಗಳ ಪ್ರತಿಯು ವಿವಿಧ ಹಂತಗಳಲ್ಲಿವೆ. ಈ ವಿದ್ಯುತ್ ಯೋಜನೆಗಳನ್ನು ಸ್ಥಾಪಿಸಲು ಅಗತ್ಯವಿರುವ ಅನುಮತಿ : ಪರ್ಮಿಟ್‌ಗಳನ್ನು ಸಂಬಂಧಿಸಿದ ಪ್ರಾಧಿಕಾರಗಳಿಂದ ಪಡೆಯುವ ಬಗ್ಗೆ ಸಂಬಂಧಿಸಿದ ಸಂಸ್ಥೆಗಳು ಪ್ರಯತ್ನಿಸುತ್ತಿವೆ. ಈ ವಿದ್ಯುತ್ ಯೋಜನೆಗಳು ಚಾಲನೆಗೊಂಡ ನಂತರ ರಾಜ್ಯದ ವಿದ್ಯುತ್ ಸರಬರಾಜಿನ ಪರಿಸ್ಥಿತಿಯಲ್ಲಿ ಸಾಕಷ್ಟು ಸುಧಾರಣೆ ಆಗುವ ನಿರೀಕ್ಷೆಯಿದೆ. ಅಲ್ಲದೇ ಕೇಮಾರಿನಲ್ಲಿ 220 ಕೆ.ವಿ. ವಿದ್ಯುತ್ ಸ್ವೀಕರಣಾ ಕೇಂದ್ರವನ್ನು ಸುಮಾರು 17.6 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಿ ಫೆಬ್ರವರಿ 99ರಲ್ಲಿ ಚಾಲನೆಗೊಳಿಸಿದ್ದು, ಈಗ ವಿದ್ಯುತ್ ಸರಬರಾಜಿನ ಪರಿಸ್ಥಿತಿಯಲ್ಲಿ ಸ್ವಲ್ಪ ಸುಧಾರಣೆ ಉಂಟಾಗಿದೆ.

ಬಿನ್ನಿಪೇಟೆ ಕ್ಷೇತ್ರದಲ್ಲಿನ ಸರಸ್ವತಿನಗರದಲ್ಲಿರುವ ಕೆರೆಯನ್ನು ಮುಚ್ಚುವ ಬಗ್ಗೆ.

3(213) ಶ್ರೀ ಕುಂಬ್ಳೆ ಸುಂದರ್‌ರಾವ್, (ಸುರತ್ಕಲ್) :— ಮಾನ್ಯ ಬೆಂಗಳೂರು ನಗರಾಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಿನ್ನಿಪೇಟೆ ಕ್ಷೇತ್ರದಲ್ಲಿ ಬರುವ ಸರಸ್ವತಿನಗರ ಪ್ರದೇಶದಲ್ಲಿ ಇರುವ ಕೆರೆಯ ವಿಸ್ತೀರ್ಣ ಎಷ್ಟು?

ಆ) ಸದರಿ ಕೆರೆ ಪ್ರದೇಶದಿಂದಾಗಿ ಆ ಪ್ರದೇಶದಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು ಸಾರ್ವಜನಿಕರು ತೊಂದರೆಗೊಳಗಾಗಿರುವುದು ಸರ್ಕಾರವು ಗಮನಿಸಿದೆಯೇ?

ಇ) ಹಾಗಿದ್ದಲ್ಲಿ ಕೆರೆಯನ್ನು ಮುಚ್ಚಿ ಆ ಜಾಗದಲ್ಲಿ ವಾಣಿಜ್ಯ ಸಂಕೀರ್ಣ ಅಥವಾ ಬಸ್ಸು ನಿಲ್ದಾಣವನ್ನು ನಿರ್ಮಿಸುವ ಬಗ್ಗೆ ಸರ್ಕಾರದವರು ಪರಿಶೀಲಿಸುವರೇ?